**ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿಸಿ.ನಂ.730/2016**

**ಸಿ.ಡಬ್ಲ್ಯೂ-6**

**ಪಿ.ಡಬ್ಲ್ಯೂ-3**

| | |
|---|---|
| ಸಾಕ್ಷಿಯ ಹೆಸರು | : ದಯಾನಂದ ಬನಸೋಡೆ |
| ತಂದೆ/ಗಂಡನ ಹೆಸರು | : ನಾಗಪ್ಪ |
| ವಯಸ್ಸು | : 35 ವರ್ಷ |
| ಉದ್ಯೋಗ | : ಕೂಲಿ |
| ವಾಸಸ್ಥಳ | : ಚಡಚಣ |

**ದಿನಾಂಕ: 25-10-2024 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ</u>**

ಚಾಸಾ 7 ರವರ ಪರಿಚಯ ಇರುತ್ತದೆ. ಈಗ್ಗೆ 8 ವರ್ಷಗಳ ಹಿಂದೆ ಪೊಲೀಸರು ಒಂದು ದಾಖಲೆಯ ಮೇಲೆ ನನ್ನ ಸಹಿ ಪಡೆದಿರುತ್ತಾರೆ ಆದರೆ ಅದರಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ ಅದೇ ವೇಳೆಗೆ ಪೋಟೆಗಳನ್ನು ತೆಗೆದಿದ್ದು ಅದು ಯಾವ ಕಾರಣಕ್ಕಾಗಿ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದು ವಾಹನ ತಡೆ ಪಂಚನಾಮೆಯಾಗಿದ್ದು ಅದನ್ನು ನಿ.ಪಿ. 3 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.3(ಎ) ಎಂದು, ಪೋಟೋಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿ.ಪಿ. 4 ಮತ್ತು 5 ಎಂದು ಗುರುತಿಸಲಾಯಿತು. ಪೊಲೀಸರು ನನ್ನ ಸಮಕ್ಷಮ ಯಾವುದೇ ವಾಹನ ತಡೆ ಪಂಚನಾಮೆ ಮಾಡಿರುವುದಿಲ್ಲ ಮತ್ತು ಯಾವುದೇ ವಾಹನಗಳನ್ನು ವಶಕ್ಕೆ ಪಡೆದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪಂಚನಾಮೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

**<u>ಪಾಟೀ ಸವಾಲು : ಮಾನ್ಯ ಸ.ಸ.ಅ. ರವರಿಂದ:</u>**

ದಿನಾಂಕ 20.09.2015 ರಂದು ಚಡಚಣ ಪೊಲೀಸ ಠಾಣಾ ಆವರಣದಲ್ಲಿ ಟಾಟಾ ಎ.ಸಿ.ನಂ.ಕೆ.ಎ-28/ಸಿ.0186 ಇದರ ವಾಹನ ತಡೆ ಪಂಚನಾಮೆಯನ್ನು ನನ್ನ ಹಾಗೂ ಚಾಸಾ 7 ರವರ ಸಮಕ್ಷಮ 09 ಗಂಟೆಯಿಂದ 10 ಗಂಟೆಯವರೆಗೆ ಮಾಡಿ ಅದೇ ವೇಳೆಗೆ ನಿ.ಪಿ. 4 ಮತ್ತು

5 ನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.**

(ತೆರೆದ ನ್ಯಾಯಾಲದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**